C.R.P.67

| Form No.4 (Civil)<br>Deposition Sheets<br>(R.P.No.57) |
|---|

**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.**

**ಸ್ಪೆಷಲ್ ಸಿ ಸಂಖ್ಯೆಃ 49/2020**

**ಪ್ರಾಸಾ. 12 ಚಾಸಾ. 24**

| | | |
|---|---|---|
| ಸಾಕ್ಷಿದಾರರ ಹೆಸರು | : | ಲಕ್ಷ್ಮೀನಾರಾಯಣಪ್ಪ @ ನಾರಾಯಣಪ್ಪ |
| ತಂದೆಯ ಹೆಸರು | : | ರಾಮಪ್ಪ |
| ವಯಸ್ಸು | : | 40 ವರ್ಷಗಳು |
| ಉದ್ಯೋಗ | : | ಗಾರೆ ಕೆಲಸ |
| ವಾಸ | : | ಕುಕ್ಕಲಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು |

**ಪ್ರಮಾಣ ವಚನ ಬೋಧಿಸಿದ ದಿನಾಂಕಃ 07.02.2026.**

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ**

ನಾನು ವ್ಯವಸಾಯ ಮತ್ತು ಗಾರೆ ಕೆಲಸಗಳನ್ನು ಮಾಡುತ್ತೇನೆ. ಗುಡ್ಡೆ ನರಸಿಂಹಸ್ವಾಮಿ ದೇವಸ್ಥಾನ ನಮ್ಮೂರಿನ ಸಮೀಪ ದೇವಸ್ಥಾನ. ನಾನು ಯಾವುದೇ ಜಾನುವಾರುಗಳನ್ನು ಸದರಿ ದೇವಸ್ಥಾನದ ಬಳಿ ಮೇಯಿಸಿರುವುದಿಲ್ಲ. ಸದರಿ ದೇವಸ್ಥಾನದ ಸ್ಥಳದ ಸಮೀಪ ಬೇರೆ ಇತರ ವ್ಯಕ್ತಿಗಳು ಕುರಿ ಜಾನುವಾರುಗಳನ್ನು ಮೇಯಿಸುತ್ತಿದ್ದರೋ ಇಲ್ಲವೋ ನನಗೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಆರೋಪಿಗಳು ಏನು ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನಗೆ ಮೃತ ವ್ಯಕ್ತಿ ಗೊತ್ತಿಲ್ಲ. ನಾನು ಆರೋಪಿಗಳ ವಿರುದ್ಧ ಯಾವುದೇ ಹೇಳಿಕೆಯನ್ನು ಪೋಲೀಸರಿಗೆ ನೀಡಿಲ್ಲ.

**(**ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕೆಂದು ಕೋರಿದ್ದು**,** ಕೋರಿಕೆ ಸಮರ್ಪಕವಾಗಿದ್ದು ಪುರಸ್ಕರಿಸಲಾಗಿದೆ ಮತ್ತು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲಾಗಿದೆ**.)**

<u>ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ</u>

"ದಿನಾಂಕ 17.08.2018 ರಂದು .................... ನೋಡಿದರೆ ಗುರುತಿಸುತ್ತೇನೆ." ಎಂಬ ಹೇಳಿಕೆಯನ್ನು ಈಗ ನನಗೆ ಓದಿ ಹೇಳಿದಂತೆ ನಾನು ಆರೋಪಿಗಳ ವಿರುದ್ಧ ನುಡಿದಿಲ್ಲ. ನನಗೆ ಓದಿ ಹೇಳಿದ ಮತ್ತು ನಾನು ಅಲ್ಲಗಳೆದ ಹೇಳಿಕೆಯನ್ನು ಈಗ ನಿ**.**ಪಿ**-34** ಎಂದು ಗುರುತಿಸಲಾಯಿತು. ನನಗೆ ಆರೋಪಿಗಳ ಬಗ್ಗೆ ಮಾಹಿತಿ ಇದ್ದರೂ ಹಾಗೂ ನಿ.ಪಿ-34 ರಂತೆ ಸಂಗತಿಗಳು ಗೊತ್ತಿದ್ದರೂ ನಾನು ಆರೋಪಿತರಿಗೆ ಸಹಾಯ ಮಾಡುವ ಸಲುವಾಗಿ ಅಸತ್ಯ ನುಡಿದೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ  ಆರೋಪಿತರ ಪರ ವಕೀಲರಿಂದಃ</u>

ಆರೋಪಿತರ ಪರ ವಕೀಲರು ಹಾಜರಿದ್ದು ತಮ್ಮದು ಪಾಟೀ ಸವಾಲು ಏನೂ ಇಲ್ಲ ಎಂದು ಹೇಳುತ್ತಿದ್ದಾರೆ, ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು**)**

ಓ. ಹೇ. ಕೇ. ಸ. ಒ.

(ಸಿದ್ದಲಿಂಗ ಪ್ರಭು)
1 ನೇ ಹೆಚ್ಚುವರಿ  ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.